2473(3361) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ):–ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಆರಂಭವಾಗಿರುವ ವೈದ್ಯಕೀಯ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ;

ಇ) ಈ ಕಾಲೇಜುಗಳಲ್ಲಿನ ಉಪನ್ಯಾಸಕರ ಹುದ್ದೆಗೆ ಸರ್ಕಾರಿ ಸೇವೆಯಲ್ಲಿರುವ ವೈದ್ಯರನ್ನು ನಿಯೋಜನೆ ಮೇಲೆ ನೇಮಿಸಿಕೊಳ್ಳುತ್ತಿರುವುದು ನಿಜವೇ;

ಈ) ಹಾಗಿದ್ದಲ್ಲಿ ಎಂಎಸ್ಸಿ ಬಯೋ ಕೆಮಿಸ್ಟ್ರಿ, ಮೈಕ್ರೋಬಯಾಲಜಿ ಮುಂತಾದ ಸ್ನಾತಕೋತ್ತರ ಪದವಿ ಪಡೆದಿರುವ ಸೇವೆಯಲ್ಲಿರುವ ಸರ್ಕಾರಿ ನೌಕರರನ್ನು ಅಗತ್ಯವಿರುವೆಡೆ ನೇಮಕ ಮಾಡಲು ಸರ್ಕಾರಕ್ಕಿರುವ ತೊಂದರೆ ಏನು;

ಉ) ಅಗತ್ಯವಿರುವ ಕಡೆ ವೈದ್ಯಕೀಯ: ಅರೆವೈದ್ಯಕೀಯ ಹುದ್ದೆಗಳಿಗೆ ಇವರುಗಳನ್ನು ನೇಮಕ ಮಾಡುವ ಬಗ್ಗೆ ಸರ್ಕಾರ ಆದೇಶ ಹೊರಡಿಸುವುದೇ?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಎಲ್ಲಾ ಅವಶ್ಯಕ ಕ್ರಮಗಳನ್ನು ವಹಿಸಲಾಗುತ್ತಿದೆ. ಪ್ರಥಮವಾಗಿ ಕಾಲೇಜು ಕಟ್ಟಡ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.

ಆ) ಹೌದು.

ಇ) 1998ರ ಭಾರತೀಯ ವೈದ್ಯಕೀಯ ಪರಿಷತ್ "Minimum qualification for teachers in Medical Institutions Regulations" ಪ್ರಕಾರ ನೇಮಕ ಮಾಡಬೇಕಾಗಿದೆ.

ಈ) ಉದ್ಭವಿಸುವುದಿಲ್ಲ.

2474(3362) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ):–ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ಆರಂಭಿಸಲಾಗುತ್ತಿರುವ ಪ್ರತಿ ವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು;

ಆ) ಈ ಸೀಟುಗಳಲ್ಲಿ ಮೆರಿಟ್ ಮೂಲಕ ಅರ್ಹತೆ ಹೊಂದಿರುವ ಬಡ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಸೀಟುಗಳ ಸಂಖ್ಯೆ ಎಷ್ಟು;

ಇ) ಬಾಕಿ ಉಳಿದ ಸೀಟುಗಳನ್ನು ಯಾವ ರೀತಿ ಹಂಚಿಕೆ ಮಾಡಲಾಗುವುದು;

ಈ) ಮೆರಿಟ್ ಆಧಾರಿತ ಬಡ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಶುಲ್ಕವೆಷ್ಟು; ಇತರ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಶುಲ್ಕವೆಷ್ಟು?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು):